**Akashvani : Bangalore**
**Regional Bulletin In Kannada**
**24.05.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**24.05.2026 / 18.40 hrs**

---

**ಮುಖ್ಯಾಂಶಗಳು**

1. **ಕಳೆದ ಮೂರು ವರ್ಷಗಳಲ್ಲಿ 61.2 ಲಕ್ಷ ದೃಢೀಕೃತ ಡಿಜಿಟಲ್ ಭೂ ದಾಖಲೆಗಳು, ಸಾರ್ವಜನಿಕರಿಗೆ ವಿತರಣೆ– ಮುಖ್ಯಮಂತ್ರಿ ಸಿದ್ದರಾಮಯ್ಯ**
2. **ಬಯಲುಸೀಮೆ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರದಿಂದ ತೀವ್ರ ಹಿನ್ನೆಡೆ – ವಿಪಕ್ಷ ನಾಯಕ ಆರ್. ಅಶೋಕ ಟೀಕೆ**
3. **ನಗರ ಆರೋಗ್ಯ ಕೇಂದ್ರಗಳ ವೈದ್ಯಕೀಯ ಉಪಕರಣಗಳ ಖರೀದಿಗೆ 22 ಕೋಟಿ ರೂಪಾಯಿ ಮಂಜೂರು – ಸಚಿವ ದಿನೇಶ್ ಗುಂಡೂರಾವ್**
4. **ಕಾಂಗ್ರೆಸ್ ಸರ್ಕಾರದಿಂದ ಕರ್ನಾಟಕದ ಜನರಿಗೆ ವಿಶ್ವಾಸ ದ್ರೋಹ : ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಗಂಭೀರ ಆರೋಪ**
5. **ಭಟ್ಕಳದಲ್ಲಿ ಕಪ್ಪೆಚಿಪ್ಪು ತೆಗೆಯಲು ಹೋಗಿ ಒಂದೇ ಕುಟುಂಬದ 8 ಮಂದಿ ನೀರು ಪಾಲು**

---

ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಕಂದಾಯ ಇಲಾಖೆಯಲ್ಲಿ ಹೊಸತನದ ಪರ್ವ ಆರಂಭವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಕಳೆದ ಜೂನ್ ತಿಂಗಳಿನಿಂದ ಈವರೆಗೆ ಒಟ್ಟು 61.2 ಲಕ್ಷ ದೃಢೀಕೃತ ಡಿಜಿಟಲ್ ಭೂ ದಾಖಲೆಗಳ ಪುಟಗಳನ್ನು ಸಾರ್ವಜನಿಕರಿಗೆ ವಿತರಿಸಲಾಗಿದೆ. ಪೋಡಿಮುಕ್ತ ಅಭಿಯಾನ 2.0 ಆರಂಭಿಸಲಾಗಿದೆ.

ಕಳೆದ ಮೂರು ವರ್ಷಗಳಲ್ಲಿ 3 ಸಾವಿರದ 247 ಗ್ರಾಮಗಳನ್ನು ಪೋಡಿಮುಕ್ತಗೊಳಿಸಲಾಗಿದೆ. 8 ಸಾವಿರದ 261 ಹೊಸ ಗ್ರಾಮಗಳನ್ನು ಗುರುತಿಸಿ 2 ಲಕ್ಷ ಹಕ್ಕುಪತ್ರಗಳನ್ನು ವಿತರಣೆ ಮಾಡಲಾಗಿದೆ ಎಂದು ಹೇಳಿದ್ದಾರೆ.

2025–26ನೇ ಸಾಲಿನಲ್ಲಿ ವಾಣಿಜ್ಯ ತೆರಿಗೆಯಿಂದ 1 ಲಕ್ಷದ 10 ಸಾವಿರದ 351 ಕೋಟಿ, ಅಬಕಾರಿ ತೆರಿಗೆಯಿಂದ 40 ಸಾವಿರದ 183 ಕೋಟಿ, ನೋಂದಣಿ ಮುದ್ರಾಂಕ ಮೋಟಾರು ವಾಹನ ಹಾಗೂ ತೆರಿಗೇತರ ರಾಜಸ್ವ ಸೇರಿ ಒಟ್ಟು ಸ್ವಂತ ರಾಜಸ್ವ 2 ಲಕ್ಷದ 12 ಸಾವಿರದ 789 ಕೋಟಿ ರೂಪಾಯಿ ಸಂಗ್ರಹವಾಗಿದೆ.

ಜಿಎಸ್‌ಟಿ ತೆರಿಗೆ ಸಂಗ್ರಹಣೆಯಲ್ಲಿ ದೇಶದಲ್ಲೇ ಕರ್ನಾಟಕಕ್ಕೆ 2ನೇ ಸ್ಥಾನ ಲಭ್ಯವಾಗಿದ್ದು, 2023–24ನೇ ಸಾಲಿನಲ್ಲಿ 94 ಸಾವಿರದ 363 ಕೋಟಿ, 2024–25ನೇ ಸಾಲಿನಲ್ಲಿ 1 ಲಕ್ಷದ 2 ಸಾವಿರದ 586 ಕೋಟಿ ಹಾಗೂ 2025–26ನೇ ಸಾಲಿನಲ್ಲಿ 1 ಲಕ್ಷದ 10 ಸಾವಿರದ 814 ಕೋಟಿ ರೂಪಾಯಿ, ಜಿಎಸ್‌ಟಿ ಸಂಗ್ರಹವಾಗಿದೆ ಎಂದು ತಿಳಿಸಿದ್ದಾರೆ.

---

ರಾಜ್ಯದಲ್ಲಿ ಬಯಲು ಸೀಮೆಯ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರವೇ ದೊಡ್ಡ ಬರವಾಗಿ ಪರಿಣಮಿಸಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಟೀಕಿಸಿದ್ದಾರೆ.

ಆರು ವರ್ಷಗಳಲ್ಲಿ 2 ಸಾವಿರದ 460ಕ್ಕೂ ಹೆಚ್ಚು ಕಾಮಗಾರಿಗಳಿಗೆ ಇನ್ನೂ ಚಾಲನೆ ಸಿಕ್ಕಿಲ್ಲ. ಬರಪೀಡಿತ ಪ್ರದೇಶಗಳ ಅಭಿವೃದ್ಧಿಗಾಗಿ ಸ್ಥಾಪಿತವಾದ ಮಂಡಳಿಯನ್ನೇ ಅನುದಾನದ ಬರದಿಂದ ಕುಂಠಿತಗೊಳಿಸಿರುವುದು ರಾಜ್ಯ ಸರ್ಕಾರದ ಘೋರ ವೈಫಲ್ಯವಾಗಿದೆ ಎಂದು ಆರೋಪಿಸಿದ್ದಾರೆ.

2025–26ರಲ್ಲಿ 269 ಕಾಮಗಾರಿಗಳ ಪೈಕಿ ಕೇವಲ ಒಂದೇ ಒಂದು ಕಾಮಗಾರಿ ಪೂರ್ಣ. 19.48 ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗೆ ಬಿಡುಗಡೆ ಮಾಡಿದ್ದು ಕೇವಲ 12.25 ಕೋಟಿ ರೂಪಾಯಿ ಮಾತ್ರ ಹಾಗಾಗಿ ಇದು ಅಭಿವೃದ್ಧಿ ಸರ್ಕಾರವಲ್ಲ.

ಗ್ಯಾರಂಟಿ ಹೆಸರಿನಲ್ಲಿ ರಾಜ್ಯದ ಬೊಕ್ಕಸ ಬರಿದಾಗಿಸಿ, ಈಗ ಬಯಲು ಸೀಮೆಯ ಜನರ ಭವಿಷ್ಯವನ್ನೇ ಕತ್ತಲಾಗಿಸಿದ್ದಾರೆ ಎಂದು ಅವರು ದೂರಿದ್ದಾರೆ.

---

ರಾಜ್ಯಾದ್ಯಂತ ನಗರ ಆರೋಗ್ಯ ಕೇಂದ್ರಗಳು ಮತ್ತು ನಮ್ಮ ಕ್ಲಿನಿಕ್‌ಗಳಿಗೆ ಅತ್ಯಾಧುನಿಕ ಪ್ರಯೋಗಾಲಯ ಹಾಗೂ ವೈದ್ಯಕೀಯ ಉಪಕರಣಗಳ ಖರೀದಿಗೆ 22 ಕೋಟಿ ರೂಪಾಯಿ ಮಂಜೂರಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಜನ ಸಾಮಾನ್ಯರ ಆರೋಗ್ಯ ರಕ್ಷಣೆಯೇ ರಾಜ್ಯ ಸರ್ಕಾರದ ಆದ್ಯತೆಯಾಗಿದ್ದು, ಈ ನಿಟ್ಟಿನಲ್ಲಿ ಸರ್ಕಾರ ವಿವಿಧ ಆರೋಗ್ಯ ಸೇವೆಗಳ ಮೂಲಕ ನಿರಂತರವಾಗಿ ಶ್ರಮಿಸುತ್ತಿದೆ.

ರಾಜ್ಯದ ನಾಗರಿಕರಿಗೂ ಗುಣಮಟ್ಟದ ಚಿಕಿತ್ಸೆ ಕಲ್ಪಿಸುವುದು ಸರ್ಕಾರದ ಸಂಕಲ್ಪ. ಇದೇ ಬದ್ಧತೆಯೊಂದಿಗೆ ಇತ್ತೀಚಿನ ಸಚಿವ ಸಂಪುಟ ಸಭೆಯಲ್ಲಿ ಯಾದಗಿರಿ ಜಿಲ್ಲೆಯ ಶಹಪುರ ಮತ್ತು ದೇವದುರ್ಗದಲ್ಲಿ ನೂತನ ತಾಯಿ–ಮಕ್ಕಳ ಆಸ್ಪತ್ರೆಗಳ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

---

ಕರ್ನಾಟಕದ ಕಾಂಗ್ರೆಸ್ ಸರ್ಕಾರವು ಇಲ್ಲಿನ ಜನರಿಗೆ ಕಳೆದ ಮೂರು ವರ್ಷಗಳಲ್ಲಿ ವಂಚಿಸುವ ಕೆಲಸ ಮಾಡಿದೆ. ಇಲ್ಲಿನ ಜನರಿಗೆ ವಿಶ್ವಾಸ ದ್ರೋಹ ಮಾಡಿದೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಟೀಕಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಒಳ ಜಗಳದಿಂದ ಜನ ಹಿತದ ಕೆಲಸಗಳನ್ನು ಕಡೆಗಣಿಸಲಾಗಿದೆ. ಜನಹಿತಕ್ಕೂ ಈ ಸರ್ಕಾರಕ್ಕೂ ಯಾವುದೇ ಸಂಬಂಧವಿಲ್ಲ ಎಂಬಂತೆ ವರ್ತಿಸುತ್ತಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಸರ್ಕಾರ ನಡೆಸುತ್ತಿರುವ ನಾಯಕರು ಸರ್ಕಾರವನ್ನು ತಮಗಾಗಿ ಬಳಸಿಕೊಳ್ಳುತ್ತಿದ್ದಾರೆ. ಅಭಿವೃದ್ಧಿ ಕಾರ್ಯಗಳ ವಿಚಾರದಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ. ಕರ್ನಾಟಕದ ಕಾಂಗ್ರೆಸ್ ಸರ್ಕಾರ ದೆಹಲಿಯ ಕಾಂಗ್ರೆಸ್ಸಿನ ಎಟಿಎಂ ಆಗಿದೆ ಎಂದು ದೂರಿದರು.

---

ಉತ್ತರಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿನ ಶಿರಾಲಿಯ ಅಳ್ವೆಕೋಡಿ ಸಮೀಪದ ತಟ್ಟಿಹಕ್ಕಲ ಕಳಿನಟ್ಟಿ ಹೊಳೆಯಲ್ಲಿ ಕಪ್ಪೆಚಿಪ್ಪೆ ತೆಗೆಯಲು ಹೋದ ಎಂಟು ಮಂದಿ ನೀರಿನಲ್ಲಿ ಮುಳುಗಿ ಮೃತಪಟ್ಟಿರುವ ಘಟನೆ ಇಂದು ಸಂಭವಿಸಿದೆ.

ಓರ್ವ ಪುರುಷ ಹಾಗೂ ಏಳು ಮಹಿಳೆಯರು ಸೇರಿದಂತೆ ಒಟ್ಟು ಎಂಟು ಜನ ಸಾವನ್ನಪ್ಪಿದ್ದಾರೆ. ಈ ಎಂಟು ಜನರ ಶವ ಪತ್ತೆಯಾಗಿದೆ.

ಕಪ್ಪೆ ಚಿಪ್ಪು ಆರಿಸಲು ಹದಿನಾಲ್ಕು ಜನರ ತಂಡ ಇಂದು ಮಧ್ಯಾಹ್ನ ನದಿಗೆ ಇಳಿದಿದ್ದರು. ತಡರಾತ್ರಿ ಸುರಿದ ಮಳೆಗೆ ನದಿಯಲ್ಲಿ ನೀರಿನ ಹರಿವು ಹೆಚ್ಚಿತ್ತು. ಜೊತೆಗೆ ಅಲೆಗಳ ಅಬ್ಬರದಿಂದ ನೀರಿನ ಮಟ್ಟ ಏರಿಕೆಯಾಗಿ, ಮುಳುಗಿದ್ದಾರೆ ಎನ್ನಲಾಗಿದೆ.

ನದಿಯಿಂದ ಮೂವರನ್ನು ರಕ್ಷಿಸಲಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನೂ ಮೂವರ ಪತ್ತೆಗಾಗಿ ಶೋಧ ಕಾರ್ಯ ನಡೆಯುತ್ತಿದೆ.

---

ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ಸಮೀಪದ ತಟ್ಟೆಹಕ್ಕಲು ನದಿಯಲ್ಲಿ ಕಪ್ಪೆಚಿಪ್ಪು ತರಲು ಹೋದವರ ಪೈಕಿ ಒಂದೇ ಕುಟುಂಬದ ಎಂಟು ಜನರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ಸಂತಾಪ ಸೂಚಿಸಿದ್ದಾರೆ.

ಇದೊಂದು ಅತ್ಯಂತ ದುರದೃಷ್ಟಕರ ಮತ್ತು ನೋವಿನ ಘಟನೆ. ದುರಂತದಲ್ಲಿ ಮಡಿದವರ ಕುಟುಂಬಕ್ಕೆ ಮಾನವೀಯ ನೆಲೆಯಲ್ಲಿ ರಾಜ್ಯ ಸರ್ಕಾರದಿಂದ ತಲಾ 5 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

---

ಹಣದ ಬಡತನ ಇದ್ದಾಗಲೇ ಗುಣಮಟ್ಟದಲ್ಲಿ ಅತ್ಯಂತ ಶ್ರೀಮಂತಿಕೆ ಇದ್ದ ಸಿನಿಮಾಗಳನ್ನು ಕೊಟ್ಟಿರುವ ಕನ್ನಡ ಚಿತ್ರರಂಗ ಈಗ ಹಣದ ಶ್ರೀಮಂತಿಕೆಯಲ್ಲಿ ಗುಣಮಟ್ಟ ಬಡವಾಗಿದೆ. ಇದಕ್ಕೆ ಸಿನಿಮಾ ರಂಗ ಕನ್ನಡತನದ ಬೇರುಗಳಿಂದ ಕಳಚಿಕೊಂಡಿರುವುದೇ ಕಾರಣ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಆಯೋಜಿಸಿದ್ದ ಚಂದನವನ ಅಂದು, ಇಂದು, ಮುಂದು ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಶತಮಾನ ಪೂರೈಸಿರುವ ಚಂದನವನಕ್ಕೆ ಸತ್ವ ಮತ್ತು ಸಂಸ್ಕಾರದ ಜೊತೆಗೆ ಸಾಂಸ್ಕೃತಿಕವಾಗಿ ಆಳವಾದ ಬೇರುಗಳಿವೆ. ಚಂದನವನ ತನ್ನ ಇತಿಹಾಸದಲ್ಲಿ ಎಂದು ಕೇವಲ ಮನರಂಜನೆಯ ಮಾಧ್ಯಮವಾಗಿರಲಿಲ್ಲ. ಬದಲಿಗೆ ಸಾಹಿತ್ಯ, ಸಂಸ್ಕೃತಿ ಮತ್ತು ಬದುಕಿನ ಮೌಲ್ಯಗಳನ್ನು ಬಿಂಬಿಸುವ ಕನ್ನಡಿಯಾಗಿತ್ತು ಎಂದು ಹೇಳಿದ್ದಾರೆ.

---

ಕೋಲಾರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವ ನೀಗಿಸುವ ಉದ್ದೇಶದಿಂದ ಜಿಲ್ಲೆಯಲ್ಲಿ ನೀರಿನ ಅದಾಲತ್ ಆಯೋಜಿಸಲಾಗಿದೆ.

ಇಂದು ಅದಾಲತ್ ಜೊತೆಗೆ ಜನರು ಎದುರಿಸುತ್ತಿರುವ ಕುಡಿಯುವ ನೀರು, ಮತ್ತಿತರ ಸಮಸ್ಯೆ ಆಲಿಸಲು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೈಕಲ್ ಸವಾರಿ ಮೂಲಕ ಸಾರ್ವಜನಿಕರೊಂದಿಗೆ ಸಮಾಲೋಚನೆ ನಡೆಸಿದರು.

ಸಾರ್ವಜನಿಕರೊಂದಿಗೆ ಮಾತುಕತೆ ನಡೆಸಿದ ಅವರು, ಪ್ರತಿ ಗ್ರಾಮ, ಪಟ್ಟಣ, ನಗರ ಪ್ರದೇಶಗಳಲ್ಲಿ ನೀರಿನ ಅದಾಲತ್ ನಡೆಸುವ ಮೂಲಕ ಬಾವಿ ಹಾಗೂ  ಕೊಳವೆಬಾವಿಗಳ ಬಗ್ಗೆ ಸಂಪೂರ್ಣ ಮಾಹಿತಿ ಕಲೆಹಾಕಿ, ನೀರಿನ ಅಭಾವ ನೀಗಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ವಿದ್ಯುತ್ ಸಮಸ್ಯೆ, ಪೈಪ್ ಲೈನ್ ರಿಪೇರಿ ಸೇರಿದಂತೆ ವಿವಿಧ ಸಮಸ್ಯೆಗಳಿಂದ ನೀರಿನ ತೊಂದರೆ ಎದುರಿಸುತ್ತಿರುವ ಸಾರ್ವಜನಿಕರು ನೇರವಾಗಿ ಅಧಿಕಾರಿಗಳಿಗೆ ದೂರು ನೀಡುವಂತೆ ಆದೇಶಿಸಿದ್ದಾರೆ.

---

ಚಿಕ್ಕಬಳ್ಳಾಪುರ ಜಿಲ್ಲೆ ಮಂಚೇನಹಳ್ಳಿ ತಾಲ್ಲೂಕು ಗಿಡಗಾನಹಳ್ಳಿ ಗ್ರಾಮದ ಸರ್ವೆ ನಂಬರ್  30ರ ಪಹಣಿಯಂತೆ 15 ಎಕರೆ ಖರಾಬು ಗೋಕಾಡು ಇದ್ದು, ಸರ್ಕಾರದ ಈ ಜಮೀನಿನಲ್ಲಿ 35-45 ಅಳತೆಯ ಮನೆಯನ್ನು ಅಕ್ರಮವಾಗಿ ನಿರ್ಮಿಸಿಕೊಂಡಿರುವ ಹಿನ್ನೆಲೆಯಲ್ಲಿ ಕೂಡಲೇ ಒತ್ತುವರಿ ತೆರವುಗೊಳಿಸುವಂತೆ ಕಟ್ಟಡ ಮಾಲೀಕರಿಗೆ  ಮಂಚೇನಹಳ್ಳಿ ತಾಲ್ಲೂಕು ತಹಶೀಲ್ದಾರ್ ಆದೇಶಿಸಿದ್ದಾರೆ.

ರಾಜಸ್ವ ನಿರೀಕ್ಷಕರ ವರದಿಯಂತೆ ಸರ್ಕಾರದ ಗೋಕಾಡು ಜಮೀನಿನಲ್ಲಿ ಒತ್ತುವರಿ ಮಾಡಿಕೊಂಡು ಅಕ್ರಮವೆಸಗಿರುವುದು ಸಾಬೀತಾಗಿದೆ. ಕೂಡಲೇ ಅಕ್ರಮವಾಗಿ ಮನೆ ನಿರ್ಮಿಸಿದ ಕಟ್ಟಡ ಮಾಲೀಕರು ಒತ್ತುವರಿ ತೆರವುಗೊಳಿಸಿ ಖಾಲಿ ಪ್ರದೇಶವನ್ನು ಸರ್ಕಾರದ ವಶಕ್ಕೆ ನೀಡಬೇಕು ಎಂದು ತಿಳಿಸಿದ್ದಾರೆ.

---

ಇನ್ನು ಹವಾವರ್ತಮಾನ,

ರಾಜ್ಯದ ಕರಾವಳಿ, ಉತ್ತರ ಒಳನಾಡಿನ ಬಹುತೇಕ ಮತ್ತು ದಕ್ಷಿಣ ಒಳನಾಡಿನ ಕೆಲವೆಡೆ ಮಳೆಯಾಗಿದೆ. ಅತಿಹೆಚ್ಚು ಮಳೆ ಕಾರವಾರದ ವೀಕ್ಷಣಾಲಯಗಳಲ್ಲಿ 20 ಸೆಂಟಿಮೀಟರ್‌ನಷ್ಟು ಮಳೆ ಬಿದ್ದಿದೆ. ಉಳಿದಂತೆ ಮಂಕಿ 13, ತಾವರಗೇರಾ 10, ಮುಂಡಗೋಡ, ನಲ್ವತವಾಡ, ವಿಜಯಪುರ, ನಾರಾಯಣಪುರದಲ್ಲಿ ತಲಾ 9 ಸೆಂಟಿ ಮೀಟರ್ ಮಳೆಯಾಗಿದೆ.

__________ ಮುಕ್ತಾಯ __________